**ದಿನಾಂಕ:10.06.2026 ರಂದು ಸಾಕ್ಷಿದಾರರು ಹಾಜರಿದ್ದು ಸಾಕ್ಷಿಗೆ ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.**

**ಮುಂದುವರೆದ ಪಾಟೀ-ಸವಾಲು: ಪ್ರತಿವಾದಿ ಪರ ಶ್ರೀ ಎಸ್.ಎಸ್., ವಕೀಲರಿಂದ:-**

1. 1 ನೇ ವಾದಿಯು ಯಾವ ದಿನಾಂಕದಂದು ಮತ್ತು ಎಲ್ಲಿ ವಿವಾಹವಾದರು ಎಂದು ನನಗೆ ಗೊತ್ತಿಲ್ಲ. 1 ನೇ ವಾದಿಯು ಮದುವೆಯ ನಂತರ ಎಲ್ಲಿ ವಾಸ ಮಾಡುತ್ತಿದ್ದರು ಎಂದು ನನಗೆ ನೆನಪಿಲ್ಲ. 1 ನೇ ವಾದಿಯು ಮದುವೆಯಾಗುವಾಗ ಅವರಿಗೆ ಎಷ್ಟು ವಯಸ್ಸಾಗಿತ್ತು ಎಂದು ನನಗೆ ಗೊತ್ತಿಲ್ಲ. 1 ನೇ ವಾದಿಯ ತಂದೆಯ ಹೆಸರು ಮಾರನಾಯಕ, ತಾಯಿಯ ಹೆಸರು ಲಕ್ಷ್ಮೀದೇವಿ. ಲಕ್ಷ್ಮೀದೇವಿಯ ತಂದೆ ಮತ್ತು ತಾಯಿಯ ಹೆಸರು ನನಗೆ ಗೊತ್ತಿಲ್ಲ. ಲಕ್ಷ್ಮೀದೇವಿಯವರು ಮದುವೆಯಾದ ನಂತರ ಕೋಡಿಹಳ್ಳಿಯಲ್ಲಿ ವಾಸಮಾಡುತ್ತಿದ್ದರು. ಲಕ್ಷ್ಮೀದೇವಿಯವರಿಗೆ ಎಷ್ಟು ಜನ

ಅಣ್ಣ ತಮ್ಮಂದಿರು ಅಕ್ಕ ತಂಗಿಯರು ಇದ್ದರು ಎಂದು ನನಗೆ ಗೊತ್ತಿಲ್ಲ. 1 ನೇ ವಾದಿಯ ತಂದೆಯ ಹೆಸರು ಹಾಗೂ ತಾಯಿಯ ಹೆಸರನ್ನು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 1 ನೇ ವಾದಿಯು ಮಾರನಾಯಕರವರ ಮಗಳಲ್ಲ ಎಂದರೆ ಸರಿಯಲ್ಲ. ಮಾರನಾಯಕರವರು ಲಕ್ಷ್ಮೀದೇವಿರವರನ್ನು ಮದುವೆಯಾಗಿಲ್ಲ ಎಂದರೆ ಸರಿಯಲ್ಲ.

**ಮುಂದುವರಿದ ಪಾಟೀ–ಸವಾಲಿಗೆ ಪ್ರತಿವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಖರ್ಚಿನೊಂದಿಗೆ ಅವಕಾಶ ನೀಡಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತ ಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.